Akashvani : Bangalore
National Bulletin In Kannada
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
14.12.2024 / 7.35AM
********

ಮುಖ್ಯಾಂಶಗಳು:

1. ನಾಲ್ಕನೇ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಗಳ ಸಮಾವೇಶದ ಅಧ್ಯಕ್ಷತೆ ವಹಿಸಲಿರುವ ಪ್ರಧಾನಿ ನರೇಂದ್ರ ಮೋದಿ
2. ಕೆನಡಾದಲ್ಲಿರುವ ಭಾರತೀಯ ಪ್ರಜೆಗಳ ಸುರಕ್ಷತೆ, ಭದ್ರತೆಗೆ ಕೇಂದ್ರ ಸರ್ಕಾರದ ಆದ್ಯತೆ - ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್
3. ದ್ವಿಪಕ್ಷೀಯ ಸಂಬಂಧ ಬಲವರ್ಧನೆಗೆ ವಿದೇಶಾಂಗ ಸಚಿವ ಎಸ್. ಜೈಶಂಕರ್ - ಪೋರ್ಚುಗಲ್ ಸಹವರ್ತಿಯೊಂದಿಗೆ ಚರ್ಚೆ
4. ಬಾರ್ಡರ್ ಗವಾಸ್ಕರ್ ಟ್ರೋಫಿ ಟೆಸ್ಟ್ ಕ್ರಿಕೆಟ್; ಸರಣಿಯ ಮೂರನೇ ಪಂದ್ಯದಲ್ಲಿಂದು ಭಾರತ - ಆಸ್ಟ್ರೇಲಿಯಾ ಮುಖಾಮುಖಿ

*******

ನವದೆಹಲಿಯಲ್ಲಿಂದು ಪ್ರಧಾನಿ ನರೇಂದ್ರ ಮೋದಿ ನಾಲ್ಕನೇ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಗಳ ಸಮಾವೇಶದ ಅಧ್ಯಕ್ಷತೆ ವಹಿಸಲಿದ್ದಾರೆ. ಈ ಸಮಾವೇಶ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ನಡುವೆ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಗುರಿ ಹೊಂದಿದೆ. ಅಲ್ಲದೆ ತ್ವರಿತ ಬೆಳವಣಿಗೆ ಮತ್ತು ಅಭಿವೃದ್ಧಿಗಾಗಿ ಸರ್ಕಾರಗಳ ನಡುವೆ ಹೆಚ್ಚಿನ ಸಮನ್ವಯತೆ ಸಾಧಿಸಲು ಈ ಸಮಾವೇಶ ಕೇಂದ್ರೀಕರಿಸಿದೆ. ಈ ಸಮಾವೇಶದ ಮೊದಲ ಆವೃತ್ತಿ ೨೦೨೨ರ ಜೂನ್ ನಲ್ಲಿ ಧರ್ಮಶಾಲಾದಲ್ಲಿ ಆಯೋಜಿಸಲಾಗಿತ್ತು. ಜನವರಿ ೨೦೨೩ರಲ್ಲಿ ನಡೆದ ಎರಡನೇ ಸಮಾವೇಶ ಹಾಗೂ ೨೦೨೩ರ ಡಿಸೆಂಬರ್‌ನಲ್ಲಿ ನಡೆದ ಮೂರನೇ ಆವೃತ್ತಿ ನವದೆಹಲಿಯಲ್ಲಿ ಆಯೋಜಿಸಲಾಗಿತ್ತು. ವಾಣಿಜ್ಯೋದ್ಯಮ, ಉದ್ಯೋಗ ಮತ್ತು ಕೌಶಲ್ಯವನ್ನು ಉತ್ತೇಜಿಸುವುದು ಈ ಸಮಾವೇಶದ ಧ್ಯೇಯವಾಕ್ಯವಾಗಿದ್ದು, ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಅನುಸರಿಸಲು ಉತ್ತಮ ಅಭ್ಯಾಸಗಳು ಮತ್ತು ಕಾರ್ಯತಂತ್ರಗಳನ್ನು ಒಳಗೊಂಡಿದೆ. ಈ ವಿಷಯದ ಅಡಿಯಲ್ಲಿ, ಆರು ಕ್ಷೇತ್ರಗಳಾದ ಉತ್ಪಾದನೆ, ಸೇವೆಗಳು, ಗ್ರಾಮೀಣ ಕೃಷಿಯೇತರ, ನಗರ, ನವೀಕರಿಸಬಹುದಾದ ಇಂಧನ ಮತ್ತು ವೃತ್ತಾಕಾರದ ಆರ್ಥಿಕತೆಗೆ ವಿಶೇಷ ಒತ್ತು ನೀಡಲಾಗುವುದು. ಸಮ್ಮೇಳನದ ಸಮಯದಲ್ಲಿ, ವಿಕಸಿತ ಭಾರತಕ್ಕಾಗಿ ತಂತ್ರಜ್ಞಾನ, ನಗರಗಳನ್ನು ಆರ್ಥಿಕ ಬೆಳವಣಿಗೆಯ ಕೇಂದ್ರಗಳಾಗಿ ಅಭಿವೃದ್ಧಿಪಡಿಸುವುದು, ಹೂಡಿಕೆಗಾಗಿ ರಾಜ್ಯಗಳಲ್ಲಿ ಆರ್ಥಿಕ ಸುಧಾರಣೆಗಳು ಮತ್ತು ಮಿಷನ್ ಕರ್ಮಯೋಗಿ ಮೂಲಕ ಸಾಮರ್ಥ್ಯ ವೃದ್ಧಿ ಕುರಿತು ನಾಲ್ಕು ವಿಶೇಷ ಕಾರ್ಯಕ್ರಮಗಳು ನಡೆಯಲಿವೆ.

*******

ಶ್ರೀಲಂಕಾ ಅಧ್ಯಕ್ಷ ಅನುರಾ ಕುಮಾರ ದಿಸ್ಸಾನಾಯಕೆ ನಾಳೆಯಿಂದ ಮೂರು ದಿನಗಳ ಭಾರತ ಪ್ರವಾಸ ಕೈಗೊಳ್ಳಲಿದ್ದಾರೆ. ನಿನ್ನೆ ಮಾಧ್ಯಮಗಳಿಗೆ ಮಾಹಿತಿ ನೀಡಿದ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಶ್ರೀಲಂಕಾದ ಅಧ್ಯಕ್ಷರಾಗಿ ಆಯ್ಕೆಯಾದ ನಂತರ ದಿಸ್ಸಾನಾಯಕೆ ಅವರ ಮೊದಲ ಭೇಟಿ ಇದಾಗಿದೆ ಎಂದು ಹೇಳಿದರು. ತಮ್ಮ ಮೂರು ದಿನಗಳ ಭೇಟಿಯ ಸಮಯದಲ್ಲಿ ಅವರು, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಲಿದ್ದು, ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಪರಸ್ಪರ ಹಿತಾಸಕ್ತಿಯ ದ್ವಿಪಕ್ಷೀಯ, ಪ್ರಾದೇಶಿಕ ಮತ್ತು ಅಂತಾರಾಷ್ಟ್ರೀಯ ವಿಷಯಗಳ ಬಗ್ಗೆ ಚರ್ಚೆ ನಡೆಸಲಿದ್ದಾರೆ ಎಂದರು. ಶ್ರೀಲಂಕಾದ ಅಧ್ಯಕ್ಷರು ರಾಷ್ಟ್ರ ರಾಜಧಾನಿಯಲ್ಲಿ ವ್ಯಾಪಾರ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದು, ಬಳಿಕ ಬಿಹಾರದ ಬೋಧಗಯಾಕ್ಕೆ ಭೇಟಿ ನೀಡಲಿದ್ದಾರೆ. ಈ ಭೇಟಿಯು ಉಭಯ ದೇಶಗಳ ನಡುವಿನ ಪರಸ್ಪರ ಬಹುಮುಖಿ ಸಹಕಾರವನ್ನು ಬಲಪಡಿಸುತ್ತದೆ ಎಂದು ರಣಧೀರ್ ಜೈಸ್ವಾಲ್ ತಿಳಿಸಿದ್ದಾರೆ. ಪಶ್ಚಿಮ ಏಷ್ಯಾದಲ್ಲಿರುವ ಭಾರತೀಯರ ವಾಪಸಾತಿ ಕುರಿತು ಮಾತನಾಡಿದ ಅವರು, ಭಾರತಕ್ಕೆ ಮರಳಲು ಇಚ್ಛಿಸಿದ ೭೭ ಭಾರತೀಯರನ್ನು ಸಿರಿಯಾದಿಂದ ಸ್ಥಳಾಂತರಿಸಲಾಗಿದೆ. ಲೆಬನಾನ್ ಮತ್ತು ಸಿರಿಯಾದಲ್ಲಿನ ರಾಯಭಾರ ಕಚೇರಿಗಳಿಂದ ನಿಕಟ ಸಮನ್ವಯದೊಂದಿಗೆ ಈ ೭೭ ಭಾರತೀಯರನ್ನು ಲೆಬನಾನ್ ಮೂಲಕ ಸ್ಥಳಾಂತರಿಸಲಾಗಿದೆ ಎಂದರು. ಕೆನಡಾದಲ್ಲಿ ಮೂವರು ಭಾರತೀಯ ವಿದ್ಯಾರ್ಥಿಗಳ ಸಾವಿನ ವಿಷಯದ ಕುರಿತು ಮಾತನಾಡಿದ ಅವರು, ಕೆನಡಾದ ಅಧಿಕಾರಿಗಳೆದುರು ಈ ವಿಷಯಕ್ಕೆ ಸಂಬಂಧಿಸಿದಂತೆ ಪ್ರಸ್ತಾಪಿಸಲಾಗಿದೆ ಎಂದು ಹೇಳಿದ್ದಾರೆ. ಘಟನೆಗಳ ಸಂಪೂರ್ಣ ತನಿಖೆಗಾಗಿ ಕೆನಡಾದಲ್ಲಿರುವ ಭಾರತೀಯ ರಾಯಭಾರ ಕಚೇರಿ ಸ್ಥಳೀಯ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದೆ. ಕೆನಡಾದಲ್ಲಿ ಭಾರತೀಯ ಪ್ರಜೆಗಳ ಸುರಕ್ಷತೆ, ಭದ್ರತೆ ಮತ್ತು ಕಲ್ಯಾಣ ಕೇಂದ್ರ ಸರ್ಕಾರದ ಪ್ರಮುಖ ಆದ್ಯತೆಯಾಗಿದೆ. ದ್ವೇಷದ ವಾತಾವರಣ ಮತ್ತು ಹೆಚ್ಚುತ್ತಿರುವ ಹಿಂಸಾಚಾರದ ಘಟನೆಗಳಿಂದಾಗಿ ಕೆನಡಾದಲ್ಲಿ ಕ್ಷೀಣಿಸುತ್ತಿರುವ ಭದ್ರತೆಯನ್ನು ಗಮನದಲ್ಲಿಟ್ಟುಕೊಂಡು ಅಲ್ಲಿನ ಭಾರತೀಯ ಪ್ರಜೆಗಳು ಮತ್ತು ವಿದ್ಯಾರ್ಥಿಗಳು ತೀವ್ರ ಎಚ್ಚರಿಕೆ ವಹಿಸಿ ಮತ್ತು ಜಾಗರೂಕರಾಗಿರಲು ಸಲಹೆ ನೀಡಲಾಗಿದೆ ಎಂದು ಅವರು ಹೇಳಿದರು. ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಅವರ ಬಾಂಗ್ಲಾದೇಶದ ಭೇಟಿಯ ಕುರಿತು ಮಾತನಾಡಿದ ಅವರು, ವಿದೇಶಾಂಗ ಕಾರ್ಯದರ್ಶಿ ಅವರು ಪ್ರಜಾಪ್ರಭುತ್ವ, ಸ್ಥಿರ, ಶಾಂತಿಯುತ, ಪ್ರಗತಿಪರ ಮತ್ತು ಅಂತರ್ಗತ ಬಾಂಗ್ಲಾದೇಶಕ್ಕೆ ಭಾರತದ ಬೆಂಬಲವಿದೆ ಎಂದು ಪ್ರತಿಪಾದಿಸಿದ್ದಾರೆ ಎಂದು ತಿಳಿಸಿದರು.

*******

ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಅವರು ಪೋರ್ಚುಗಲ್‌ನ ರಾಜ್ಯ ಮತ್ತು ವಿದೇಶಾಂಗ ವ್ಯವಹಾರಗಳ ಸಚಿವ ಪಾಲೊ ರಾಂಜೆಲ್ ಅವರೊಂದಿಗೆ ನಿನ್ನೆ ನವದೆಹಲಿಯಲ್ಲಿ ಚರ್ಚೆ ನಡೆಸಿದರು. ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಡಾ. ಜೈಶಂಕರ್, ಸಭೆಯಲ್ಲಿ ಉಭಯ ರಾಷ್ಟ್ರಗಳ ನಡುವಿನ ಪಾಲುದಾರಿಕೆಯ ಪರಿಶೀಲನೆ ನಡೆಸಲಾಯಿತು. ಹಾಗೆಯೇ ಶುದ್ಧ

ಇಂಧನ, ತಂತ್ರಜ್ಞಾನ, ಡಿಜಿಟಲ್, ಚಲನಶೀಲತೆ, ಪರಂಪರೆ ಮತ್ತು ಕಡಲ ಕ್ಷೇತ್ರಗಳಲ್ಲಿ ಹೊಸ ಅವಕಾಶಗಳನ್ನು ಅನ್ವೇಷಿಸಲಾಯಿತು ಎಂದು ಹೇಳಿದರು. ಉಭಯ ನಾಯಕರು ಪಶ್ಚಿಮ ಏಷ್ಯಾ, ಉಕ್ರೇನ್ ಮತ್ತು ಇಂಡೋ-ಪೆಸಿಫಿಕ್‌ನಲ್ಲಾಗುತ್ತಿರುವ ಪ್ರಸ್ತುತ ಬೆಳವಣಿಗೆಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು. ವಿದೇಶಾಂಗ ವ್ಯವಹಾರಗಳ ಸಚಿವರು ಎರಡೂ ದೇಶಗಳ ಬಹುಪಕ್ಷೀಯ ಸಹಕಾರ ಮತ್ತು ಬಲವಾದ ಭಾರತ-ಐರೋಪ್ಯ ಒಕ್ಕೂಟ ಬಾಂಧವ್ಯಕ್ಕಾಗಿ ಪೋರ್ಚುಗಲ್‌ನ ಬೆಂಬಲವನ್ನು ಶ್ಲಾಘಿಸಿದರು.

*******

೨೦೧೪ರಿಂದ ಸರ್ಕಾರದ ನಿರಂತರ ಪ್ರಯತ್ನಗಳ ಪರಿಣಾಮವಾಗಿ ಪಾಕಿಸ್ತಾನದ ಜೈಲುಗಳಿಂದ ೨ ಸಾವಿರದ ೬೩೯ ಭಾರತೀಯ ಮೀನುಗಾರರು ಬಿಡುಗಡೆ ಆಗಿದ್ದಾರೆ ಎಂದು ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ತಿಳಿಸಿದ್ದಾರೆ.  ಲೋಕಸಭೆಯಲ್ಲಿ ಪ್ರಶ್ನೋತ್ತರ ವೇಳೆಯಲ್ಲಿ ಈ ಮಾಹಿತಿ ನೀಡಿದ ಅವರು, ೨೦೦೮ ರ ಒಪ್ಪಂದದ ಪ್ರಕಾರ, ಪ್ರತಿ ವರ್ಷ ಜನವರಿ ೧ ಮತ್ತು ಜುಲೈ ೧ ರಂದು ಜೈಲಿನಲ್ಲಿರುವ ಉಭಯ ದೇಶಗಳ ನಾಗರಿಕರ ಪಟ್ಟಿಗಳನ್ನು ವಿನಿಮಯ ಮಾಡಿಕೊಳ್ಳಲಾಗುತ್ತದೆ ಎಂದರು.

*******

ಭಾರತದ ಸಂವಿಧಾನದ ೭೫ ವರ್ಷಗಳ ವೈಭವದ ಪಯಣದ ಕುರಿತು ಲೋಕಸಭೆಯಲ್ಲಿ ಎರಡು ದಿನಗಳ ವಿಶೇಷ ಚರ್ಚೆ ನಿನ್ನೆ ಆರಂಭವಾಯಿತು. ಇಂದೂ ಕೂಡ ಚರ್ಚೆ ಮುಂದುವರಿಯಲಿದ್ದು, ಲೋಕಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಉತ್ತರ ನೀಡುವ ನಿರೀಕ್ಷೆ ಇದೆ. ಲೋಕಸಭೆಯಲ್ಲಿ ನಿನ್ನೆ ಚರ್ಚೆಯನ್ನು ಆರಂಭಿಸಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಭಾರತೀಯ ಸಂವಿಧಾನವು ಸಾಮಾಜಿಕ, ಆರ್ಥಿಕ, ರಾಜಕೀಯ ಮತ್ತು ಸಾಂಸ್ಕೃತಿಕ ಜೀವನದ ಎಲ್ಲಾ ಅಂಶಗಳನ್ನು ಒಳಗೊಳ್ಳುವ ಮೂಲಕ ರಾಷ್ಟ್ರ ನಿರ್ಮಾಣಕ್ಕೆ ದಾರಿ ಮಾಡಿಕೊಡುತ್ತದೆ. ಸಂವಿಧಾನವು ದೇಶದ ನಾಗರಿಕ ಮೌಲ್ಯಗಳ ಅಭಿವ್ಯಕ್ತಿಯಾಗಿದೆ ಎಂದು ಹೇಳಿದರು.  ಚರ್ಚೆಯಲ್ಲಿ ಭಾಗವಹಿಸಿದ ಕಾಂಗ್ರೆಸ್‌ನ ಪ್ರಿಯಾಂಕಾ ಗಾಂಧಿ ವಾದ್ರಾ ಮಾತನಾಡಿ, ಸಂವಿಧಾನವು ನಾಗರಿಕರನ್ನು ಸುರಕ್ಷಿತವಾಗಿಡಲು ಸುರಕ್ಷತಾ ರಕ್ಷಾ ಕವಚವಾಗಿದೆ. ಇದು ನ್ಯಾಯ, ಏಕತೆ ಮತ್ತು ವ್ಯಕ್ತಪಡಿಸುವ ಹಕ್ಕುಗಳ ರಕ್ಷಾ ಕವಚವಾಗಿದೆ ಎಂದು ಹೇಳಿದರು.ಹಾಗೆಯೇ ಸಮಾಜವಾದಿ ಪಕ್ಷದ ಅಖಿಲೇಶ್ ಯಾದವ್, ಡಿಎಂಕೆಯ ಟಿ.ಆರ್. ಬಾಲು, ತೃಣಮೂಲ ಕಾಂಗ್ರೆಸ್‌ನ ಕಲ್ಯಾಣ ಬ್ಯಾನರ್ಜಿ, ಟಿಡಿಪಿ ಸಂಸದ ಡಾ. ಬೈರೆಡ್ಡಿ ಶಬರಿ ಮತ್ತಿತರರು ಚರ್ಚೆಯಲ್ಲಿ ಪಾಲ್ಗೊಂಡರು.

*******

ಮಹಿಳಾ ಅಭಿವೃದ್ಧಿಯಿಂದ ಮಹಿಳಾ ನೇತೃತ್ವದ ಅಭಿವೃದ್ಧಿಗೆ ಪರಿವರ್ತನೆ ತರಲು ಸರ್ಕಾರ ಬದ್ಧವಾಗಿದೆ ಎಂದು ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ

’ಮಹಿಳಾ ನಾಯಕರು: ೨೦೪೭ರ ವೇಳೆಗೆ ವಿಕಸಿತ ಭಾರತಕ್ಕಾಗಿ ಶೈಕ್ಷಣಿಕ ಶ್ರೇಷ್ಠತೆಯನ್ನು ರೂಪಿಸುವ’ ಕುರಿತು ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು, ರಾಷ್ಟ್ರೀಯ ಶಿಕ್ಷಣ ನೀತಿ ೨೦೨೦ಕ್ಕೆ ಅನುಗುಣವಾಗಿ ಶಿಕ್ಷಣದ ಪ್ರತಿಯೊಂದು ಹಂತದಲ್ಲೂ ಮಹಿಳಾ ಸಬಲೀಕರಣವನ್ನು ಕಾರ್ಯಾಗಾರ ಒತ್ತಿಹೇಳುತ್ತದೆ ಎಂದರು. ನಾರಿ ಶಕ್ತಿಯು ಶಕ್ತಿ, ಸ್ಥಿತಿಸ್ಥಾಪಕತ್ವ ಮತ್ತು ಭರವಸೆಯ ಸಂಕೇತವಾಗಿದೆ ಮತ್ತು ಮಹಿಳೆಯರನ್ನು ಗೌರವದಿಂದ ನಡೆಸಿಕೊಳ್ಳುವುದು ಭಾರತೀಯ ನಾಗರಿಕತೆಯ ಅಂತರ್ಗತ ಮೌಲ್ಯವಾಗಿದೆ ಎಂದು ಸಚಿವರು ತಿಳಿಸಿದರು.

*******

೨೦೧೭ರಲ್ಲಿ ಪ್ರಧಾನಮಂತ್ರಿ ಮಾತೃ ವಂದನಾ ಯೋಜನೆಯ ಪ್ರಾರಂಭದಿಂದ ೩.೬೪ ಕೋಟಿ ಫಲಾನುಭವಿಗಳಿಗೆ ೧೮ ಸಾವಿರದ ೮೫೪ ಕೋಟಿ ರೂಪಾಯಿಗಳನ್ನು ವಿತರಿಸಲಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಲೋಕಸಭೆಯಲ್ಲಿ ನಿನ್ನೆ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಅನ್ನಪೂರ್ಣ ದೇವಿ, ಪ್ರಧಾನಮಂತ್ರಿ ಮಾತೃ ವಂದನಾ ಯೋಜನೆಯಡಿ ಫಲಾನುಭವಿಗಳಿಂದ ಕಾಗದರಹಿತ ನೋಂದಣಿಗೆ ಕ್ರಮ ಕೈಗೊಳ್ಳಲಾಗಿದೆ. ಸುಲಭ ನೋಂದಣಿಗಾಗಿ ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರಿಗೆ ಲಭ್ಯವಿರುವ ಸೌಲಭ್ಯಗಳ ಜೊತೆಗೆ ಮೊಬೈಲ್ ಅಪ್ಲಿಕೇಶನ್ ಅನ್ನು ಪ್ರಾರಂಭಿಸಲಾಗಿದೆ ಎಂದು ಹೇಳಿದರು.

*******

ಪುಷ್ಪ ೨ ಚಿತ್ರದ ಪ್ರಥಮ ಪ್ರದರ್ಶನದ ವೇಳೆ ಹೈದರಾಬಾದ್‌ನ ಸಂಧ್ಯಾ ಚಿತ್ರಮಂದಿರದಲ್ಲಿ ಸಂಭವಿಸಿದ ದುರ್ಘಟನೆಯು ರಾಜ್ಯ ಮತ್ತು ಸ್ಥಳೀಯ ಆಡಳಿತದ ಕಳಪೆ ವ್ಯವಸ್ಥೆಗಳ ಸ್ಪಷ್ಟ ನಿದರ್ಶನ ಎಂದು ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಚಲನಚಿತ್ರ ಉದ್ಯಮದ ಬಗ್ಗೆ ಕಾಂಗ್ರೆಸ್‌ಗೆ ಯಾವುದೇ ಗೌರವವಿಲ್ಲ ಮತ್ತು ಚಲನಚಿತ್ರ ನಟ ಅಲ್ಲು ಅರ್ಜುನ್ ಅವರ ಬಂಧನವು ಅದನ್ನು ಮತ್ತೊಮ್ಮೆ ಸಾಬೀತುಪಡಿಸಿದೆ. ತೆಲಂಗಾಣ ಸರ್ಕಾರವು ಸಂತ್ರಸ್ತರಿಗೆ ಸಹಾಯ ಮಾಡಬೇಕು ಹಾಗೂ ಚಿತ್ರರಂಗದವರ ಮೇಲೆ ಕ್ರಮ ಕೈಗೊಳ್ಳುವ ಬದಲು ಪ್ರದರ್ಶನದ ವ್ಯವಸ್ಥೆ ಮಾಡಿದವರಿಗೆ ಶಿಕ್ಷೆ ನೀಡಬೇಕು ಎಂದು ಸಚಿವರು ತಿಳಿಸಿದರು. ನಿನ್ನೆ, ನಟ ಅಲ್ಲು ಅರ್ಜುನ್ ಅವರ ಇತ್ತೀಚಿನ ಚಿತ್ರವಾದ ಪುಷ್ಪ ೨: ದಿ ರೂಲ್‌ನ ಪ್ರಥಮ ಪ್ರದರ್ಶನದ ವೇಳೆ ಸಂಭವಿಸಿದ ಕಾಲ್ತುಳಿತದಲ್ಲಿ ಮಹಿಳೆಯೊಬ್ಬರು ಸಾವನ್ನಪ್ಪಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಹೈದರಾಬಾದ್‌ನ ಸಂಧ್ಯಾ ಚಿತ್ರಮಂದಿರದಲ್ಲಿ ಪೊಲೀಸರು ಬಂಧಿಸಿದ್ದಾರೆ. ನಂತರ ನಟನಿಗೆ ತೆಲಂಗಾಣ ಹೈಕೋರ್ಟ್ ನಾಲ್ಕು ವಾರಗಳ ಮಧ್ಯಂತರ ಜಾಮೀನು ನೀಡಿದೆ.

*******

ವಿಶ್ವ ಚೆಸ್ ಚಾಂಪಿಯನ್ ಡಿ.ಗುಕೇಶ್‌ಗೆ ಐದು ಕೋಟಿ ರೂಪಾಯಿಗಳ ಬಹುಮಾನವನ್ನು ತಮಿಳುನಾಡು ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್ ಘೋಷಿಸಿದ್ದಾರೆ. ವಿಶ್ವ ಚೆಸ್ ಚಾಂಪಿಯನ್ ಡಿ.ಗುಕೇಶ್‌ಗೆ ತಮಿಳುನಾಡು ರಾಜ್ಯಪಾಲ ಆರ್.ಎನ್.ರವಿ ಸೇರಿದಂತೆ ದೇಶದ ಅನೇಕ ಗಣ್ಯರು ಅಭಿನಂದನೆ ಸಲ್ಲಿಸಿದ್ದಾರೆ.

*******

ಭಾರತ ಮತ್ತು ಆಸ್ಟ್ರೇಲಿಯಾ ನಡುವಿನ ಬಾರ್ಡರ್ ಗವಾಸ್ಕರ್ ಟೆಸ್ಟ್ ಸರಣಿಯ ಮೂರನೇ ಪಂದ್ಯ ಬ್ರಿಸ್ಬೇನ್‌ನ ಗಬ್ಬಾ ಕ್ರೀಡಾಂಗಣದಲ್ಲಿ ಆರಂಭಗೊಂಡಿದ್ದು, ಟಾಸ್ ಗೆದ್ದ ಭಾರತ ಬೌಲಿಂಗ್ ಆಯ್ದುಕೊಂಡಿದೆ. ಇತ್ತೀಚಿನ ವರದಿ ಬಂದಾಗ ಮಳೆಯಿಂದಾಗಿ ಆಟ ಸ್ಥಗಿತಗೊಂಡಿದ್ದು, ಬ್ಯಾಟಿಂಗ್ ಆರಂಭಿಸಿರುವ ಆಸ್ಟ್ರೇಲಿಯಾ ಯಾವುದೇ ವಿಕೆಟ್ ನಷ್ಟವಿಲ್ಲದೆ ೨೮ ರನ್ ಗಳಿಸಿದೆ. ಈಗಾಗಲೇ ನಡೆದಿರುವ ಸರಣಿಯ ಎರಡು ಪಂದ್ಯಗಳಲ್ಲಿ ಭಾರತ ಹಾಗೂ ಆಸ್ಟ್ರೇಲಿಯಾ ತಲಾ ಒಂದು ಪಂದ್ಯಗಳಲ್ಲಿ ಗೆದ್ದಿವೆ.

******